ಮೈಸೂರು ಲ್ಯಾಂಪ್ಸ್ ಕಾರ್ಖಾನೆಯನ್ನು ಪುನಶ್ಚೇತನಗೊಳಿಸುವುದು

3211 - ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ) : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಮೈಸೂರು ಲ್ಯಾಂಪ್ಸ್ ಸಂಸ್ಥೆ ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಈ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಸಿಬ್ಬಂದಿಗಳ ಸಂಖ್ಯೆ ಎಷ್ಟು; ಇವರಿಗೆ ಪ್ರತಿ ತಿಂಗಳು ನೀಡುತ್ತಿದ್ದ ವೇತನ ಎಷ್ಟು (ವಿವರ ನೀಡುವುದು)*

ಇ) *ಈ ಸಂಸ್ಥೆಯನ್ನು ಪುನರುಜ್ಜೀವನಗೊಳಿಸುವಲ್ಲಿ ಸರ್ಕಾರ ಏನಾದರೂ ಕಾರ್ಯ ಯೋಜನೆಯನ್ನು ಹಮ್ಮಿಕೊಂಡಿದೆಯೇ?*

ಈ) *ಹಾಗಿದ್ದಲ್ಲಿ ಕಾರ್ಯ ಯೋಜನೆಯ ವಿವರಗಳನ್ನು ನೀಡುವುದು?*

ಶ್ರೀ ಆರ್.ವಿ. ದೇಶಪಾಂಡೆ (ಭಾರಿ ಮತ್ತು ಮಧ್ಯಮ ಕೈಗಾರಿಕೆ ಸಚಿವರು) :

ಅ) ಬಂದಿದೆ.

ಆ) ಸದರಿ ಕಂಪನಿಯಲ್ಲಿ ನಿಯೋಜನೆ ಮೇರೆಗೆ ಸರ್ಕಾರಿ ಹಾಗೂ ಇತರೆ ಸಂಸ್ಥೆಗಳಿಗೆ ಕಳುಹಿಸಿರುವ 228 ನೌಕರರನ್ನ ಹೊರತು ಪಡಿಸಿ, ಒಟ್ಟು 1391 ನೌಕರರು ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಅವರ ಮಾಸಿಕ ವೇತನದ ಬಾಬ್ತು ರೂ. 90.00 ಲಕ್ಷಗಳಾಗುತ್ತದೆ.

ಇ) ಹೌದು.

ಈ) ಸರ್ಕಾರವು ಸದರೀ ಕಂಪನಿಯನ್ನು ನಡೆಸಲು ಸುಮಾರು 3-4 ವರ್ಷಗಳಿಂದ ಆರ್ಥಿಕ ಸಹಾಯವನ್ನು ನೀಡುತ್ತಾ ಬಂದಿದೆ. ಒಂದು ಖಾಸಗೀ ಸಂಸ್ಥೆಯ ಸಲಹಾ ಸಂಸ್ಥೆಯಿಂದ ಬಂದಿರುವ ಖಾಸಗೀಕರಣದ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸುತ್ತಿದೆ. ಸರ್ಕಾರವು ಸಂಸ್ಥೆಯ ಮಾರಾಟ ತೆರಿಗೆಯನ್ನು ಮಾರ್ಚ್ 2001ರ ವರೆಗೆ ಮುಂದುವರೆಸುವುದನ್ನು ಪರಿಶೀಲಿಸುತ್ತಿದೆ. ಇದಲ್ಲದೆ ವಿವಿಧ ಸರ್ಕಾರಿ ಇಲಾಖೆ ಹಾಗೂ ಸಂಸ್ಥೆಗಳಿಗೆ ಕಂಪನಿಯ 175 ನೌಕರರನ್ನು ನಿಯೋಜನೆ ಮೇರೆಗೆ ಕಳುಹಿಸುವ ಪ್ರಸ್ತಾವನೆಯನ್ನು ಸಹ ಪರಿಶೀಲಿಸುತ್ತಿದೆ.

ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ಸಾಲ

3212 - ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ) : ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ (ನಬಾರ್ಡ್) ಸಾಲ ಪಡೆದು ರಾಜ್ಯ ಸರ್ಕಾರ ಜಾರಿಗೊಳಿಸುತ್ತಿರುವ ನೀರಾವರಿ ಯೋಜನೆಗಳಲ್ಲಿನ ಕಳಪೆ ಕಾಮಗಾರಿಗಳನ್ನು ತಡೆಗಟ್ಟಲು ಸರ್ಕಾರೇತರ ಹೊರಗಿನ ಏಜನ್ಸಿಯೊಂದರ ತಪಾಸಣೆಗಾಗಿ ನಬಾರ್ಡ್ ಒತ್ತಾಯಪಡಿಸಿರುವುದು ನಿಜವೇ?*

ಅ) ಈ ಕಳಪೆ ಕಾಮಗಾರಿಗಳನ್ನು ತಪಾಸಣೆ ನಡೆಸಲು ಸರ್ಕಾರ ತೀರ್ಮಾನಿಸಿದೆಯೇ?

ಇ) ಈ ಯೋಜನೆಯಡಿ ನಡೆದಿರುವ ಎಷ್ಟು ಕಳಪೆ ಕಾಮಗಾರಿಗಳನ್ನು ಸರ್ಕಾರ ಪತ್ತೆ ಮಾಡಿದೆ?

ಈ) ಅದಕ್ಕೆ ಕಾರಣರಾದವರ ಮೇಲೆ ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್.ಕೆ. ಪಾಟೀಲ್ (ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಸುಳ್ಯ ನಗರಕ್ಕೆ ಅಗ್ನಿಶಾಮಕ ಠಾಣೆ ಮಂಜೂರಾತಿ

3213 - ಶ್ರೀ ಅಂಗಾರ ಎಸ್. (ಸುಳ್ಯ) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸುಳ್ಯ ನಗರಕ್ಕೆ ಅಗ್ನಿಶಾಮಕ ಠಾಣೆಯ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಅಗ್ನಿಶಾಮಕ ಠಾಣೆಯನ್ನು ಮಂಜೂರು ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಪಿರಿಯಾಪಟ್ಟಣ ತಾಲ್ಲೂಕಿನ ಇಂಗಲಗೆರೆ ಕಾಮಗಾರಿ

3214 - ಶ್ರೀ ಬಸವರಾಜು ಹೆಚ್.ಸಿ. (ಪಿರಿಯಾಪಟ್ಟಣ) : ಮಾನ್ಯ ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪಿರಿಯಾಪಟ್ಟಣ ತಾಲ್ಲೂಕು ಇಂಗಲಗೆರೆ ಕಾಮಗಾರಿಗೆ ಇದುವರೆಗೆ ವಿಚ್ಚಾದ ಹಣ ಎಷ್ಟು?

ಆ) ಈ ಯೋಜನೆ ಪೂರ್ತಿಗೊಳ್ಳಲು ತಗಲುವ ವೆಚ್ಚವೆಷ್ಟು?